ಕರ್ನಾಟಕ ಸರ್ಕಾರ
ಉಪ ನಿರ್ದೇಶಕರವರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು ನಗರ ಜಿಲ್ಲೆ, ಸುಧಾರಣಾ ಸಂಸ್ಥೆಗಳ ಸಂಕೀರ್ಣ, ಡಾ: ಎಂ.ಹೆಚ್. ಮರಿಗೌಡ ರಸ್ತೆ, ಬೆಂಗಳೂರು-560 029
E-mail: dwcd.dd@gmail.com Phone No: 080-26578688

---

ಸಂಖ್ಯೆ:ಉಪನಿಬೆಂನ:ಐಸಿಡಿಎಸ್:ಸಿಆರ್-36:2018-19(ಭಾಗ-1) ದಿನಾಂಕ:06-03-2019

# ಪ್ರ ಕ ಟ ಣೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ನಗರ ಜಿಲ್ಲೆಯ ಶಿಶು ಅಭಿವೃದ್ಧಿ ಯೋಜನೆ, ಬೆಂಗಳೂರು ಉತ್ತರ-1, ಬೆಂಗಳೂರು ಉತ್ತರ-2, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಬೆಂಗಳೂರು ರಾಜ್ಯ ಹಾಗೂ ಆನೇಕಲ್ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಖಾಲಿ ಇರುವ 127 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 274 ಅಂಗನವಾಡಿ ಸಹಾಯಕಿಯರ ಗೌರವಧನ ಆಧಾರಿತ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಆನ್ ಲೈನ್ ಮೂಲಕ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಿನಾಂಕ:08-03-2019 ರಿಂದ ದಿನಾಂಕ:07-04-2019 ರತನಕ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳನ್ನು ಸಂಬಂಧಪಟ್ಟ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಕಛೇರಿ ವೇಳೆಯಲ್ಲಿ ಬೆಳಿಗ್ಗೆ 10.00 ರಿಂದ ಸಂಜೆ 5.30ರ ತನಕ ಪಡೆಯಬಹುದು.

**ಅರ್ಜಿ ಸಲ್ಲಿಸಬೇಕಾದ Website Adress : <u>www.anganwadirecruit.kar.nic.in</u>**

## Calendar of Events

| ವಿವರ | ದಿನಗಳು | ದಿನಾಂಕ |
|---|---|---|
| ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 08-03-209 | - |
| ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಸಂಜೆ 5.00 ರವರೆಗೆ | 07-04-2019 | 30 ದಿನ |
| ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಸ್ವೀಕರಿಸಲಾದ ಅರ್ಜಿಗಳನ್ನು ಆಯ್ಕೆ ಸಮಿತಿಯಲ್ಲಿ ಪರಿಶೀಲನೆ | 12-04-2019 ರಿಂದ 15-04-2019 | 4 ದಿನ |
| ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಆಯ್ಕೆ ಸಮಿತಿಯಿಂದ ಅನುಮೋದನೆ ಪಡೆಯುವುದು. | 16-04-2019 ರಿಂದ 20-04-2019 | 4 ದಿನ |
| ಅಭ್ಯರ್ಥಿಗಳಿಂದ ಆಕ್ಷೇಪಣೆ ಸಲ್ಲಿಸುವಿಕೆಗೆ ಕಾಲಾವಕಾಶ. | 21-04-2019 ರಿಂದ 29-04-2019 | 8 ದಿನ |
| ಆಕ್ಷೇಪಣೆ ಬಂದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ. | 30-04-2019 ರಿಂದ 03-05-2019 | 3 ದಿನ |
| ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನಡೆಸಿ ಅಂತಿಮ ಪಟ್ಟಿಗೆ ಅನುಮೋದನೆ ಪಡೆಯುವುದು. | 04-05-2019 ರಿಂದ 08-05-2019 | 4 ದಿನ |

| ಕ್ರ.ಸಂ | ಸಂಪರ್ಕಿಸಬೇಕಾದವರು | ದೂರವಾಣಿ ಸಂಖ್ಯೆ |
|---|---|---|
| 1 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ಉತ್ತರ-1 | 080-28462513 |
| 2 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ಉತ್ತರ-2 | 080-28462513 |
| 3 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ಕೇಂದ್ರ | 080-25524490 |
| 4 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ದಕ್ಷಿಣ | 080-26713097 |
| 5 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ರಾಜ್ಯ | 080-26601917 |
| 6 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಆನೇಕಲ್ ತಾಲ್ಲೂಕು | 080-27830962 |

ಸೂಚನೆಗಳು :

1. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮೊದಲು ಇದರೊಂದಿಗೆ ಲಗತ್ತಿಸಿರುವ ನೇಮಕಾತಿ ಮಾರ್ಗಸೂಚಿ/ ನಿಬಂಧನೆಗಳನ್ನು ಓದಿಕೊಂಡು ನಂತರ ಅಗತ್ಯ ದಾಖಲೆಗಳೊಂದಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸತಕ್ಕದ್ದು.
2. ಖಾಲಿ ಇವರು ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸುವವರು ಅರ್ಜಿ ಆಹ್ವಾನಿಸಿರುವ ಸ್ಥಳದವರೇ ಆಗಿರತಕ್ಕದ್ದು. ಬೇರೆ ಸ್ಥಳ, ಬೇರೆ ತಾಲ್ಲೂಕು ಹಾಗೂ ಬೇರೆ ಜಿಲ್ಲೆಯ ಅಭ್ಯರ್ಥಿಗಳು ಮತ್ತು ಪುರಷ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.
3. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳಿಗೆ ಅರ್ಜಿಗಳನ್ನು ಹಾಗೂ ದಾಖಲಾತಿಗಳನ್ನು ಆನ್‌ಲೈನ್(Online) ಮೂಲಕ ಮಾತ್ರ ಸಲ್ಲಿಸಬೇಕಾಗಿರುತ್ತದೆ.
4. ಸರ್ಕಾರದ ಮಾರ್ಗ ಸೂಚಿಯ ಪ್ರಕಾರ ಹಾಲಿ ಕಾರ್ಯಕರ್ತೆಯರು ಅರ್ಜಿ ಆಹ್ವಾನಿಸಿರುವ ಅಂಗನವಾಡಿ ಕೇಂದ್ರಗಳಿಗೆ ವರ್ಗಾವಣೆ ಕೋರಿದಲ್ಲಿ ವರ್ಗಾವಣೆಗೆ ಪ್ರಥಮ ಆದ್ಯತೆ ನೀಡಲಾಗುವುದು. ಅಂತಹ ಕೇಂದ್ರಕ್ಕೆ ಅರ್ಜಿ ಆಹ್ವಾನಿಸಲಾಗಿದ್ದರೂ ಹೊಸ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
5. ಹೊಸದಾಗಿ ಮಂಜೂರಾಗಿರುವ ಅಂಗನವಾಡಿ ಕೇಂದ್ರಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅನಿವಾರ್ಯ ಕಾರಣದಿಂದಾಗಿ ಸ್ಥಳ ಬದಲಾವಣೆ ಮಾಡುವ ಸಂದರ್ಭ ಬಂದಲ್ಲಿ ಈಗ ಅರ್ಜಿ ಆಹ್ವಾನಿಸಿರುವ ಅಂಗನವಾಡಿ ಕೇಂದ್ರಗಳಿಗೆ ಸಲ್ಲಿಸಿರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ,
6. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಲ್ಲಿ ಆಗುವ ತಪ್ಪು ಒಪ್ಪುಗಳಿಗೆ ಅರ್ಜಿದಾರರೇ ಹೊಣೆಗಾರರಾಗಿರುತ್ತಾರೆ. ಹಾಗೂ ಅಜಿಗಳನ್ನು ಅಪ್‌ಲೋಡ್ ಮಾಡುವಲ್ಲಿನ ತಾಂತ್ರಿಕ ಸಮಸ್ಯೆಗಳನ್ನು ಇಲಾಖೆಯಿಂದ ಪರಿಹರಿಸಲಾಗುವುದಿಲ್ಲ.
7. ಆಯ್ಕೆಯ ವಿವರಗಳನ್ನು ಆನ್‌ಲೈನ್ ಮೂಲಕ ಪ್ರಚಾರ ಪಡಿಸಲಾಗುವುದಿಲ್ಲ. ಫಲಿತಾಂಶಗಳನ್ನು ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯ ಸೂಚನಾಫಲಗಳಲ್ಲಿ ಪ್ರಚಾರಪಡಿಸಲಾಗುವುದು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು

1. ಅರ್ಜಿ ನಿಗದಿತ ನಮೂನೆಯಲ್ಲಿ (Online)
2. ಜನನ ಪ್ರಮಾಣ ಪತ್ರ/ ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ. ಅಂಕಪಟ್ಟಿ.
3. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ. (ಕಾರ್ಯಕರ್ತೆ ಹುದ್ದೆಗೆ ಎಸ್.ಎಸ್.ಎಲ್.ಸಿ.ಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿರುವವರು ಎಸ್.ಎಸ್.ಎಲ್.ಸಿ. ತೇರ್ಗಡೆ ಹೊಂದಿದ ಅಂಕಪಟ್ಟಿಯನ್ನು ಮಾತ್ರ ಲಗತ್ತಿಸುವುದು.)
4. ತಹಶೀಲ್ದಾರರು/ ಉಪ ತಹಶೀಲ್ದಾರರಿಂದ ಪಡೆದ 1 ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ.
5. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ. (ಸಹಾಯಕಿ ಹುದ್ದೆಗೆ ಕನಿಷ್ಠ 4ನೇ ತರಗತಿ ಉತ್ತೀರ್ಣ ಗರಿಷ್ಟ 9ನೇ ತರಗತಿ ಉತ್ತೀರ್ಣ, ಅಂಕಪಟ್ಟಿಯನ್ನು ಲಗತ್ತಿಸುವುದು.)
6. ಪರಿಶಿಷ್ಟ ಜಾತಿ/ಪರಿಶಿಷ್ಠ ಪಂಗಡ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರ ಲಗತ್ತಿಸುವ್ಯದು.
7. ವಿಧವೆಯಾದಲ್ಲಿ ಪತಿಯ ಮರಣ ಪ್ರಮಾಣ ಪತ್ರ (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ.)

8. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪ ವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ. ಹಾಗೂ ಮರಣ ಪ್ರಮಾಣ ಪತ್ರ ಲಗತ್ತಿಸಿವುದು.
9. ಅಂಗವಿಕಲತೆ ಪ್ರಮಾಣ ಪತ್ರ ಕಾರ್ಯಕರ್ತೆ ಹುದ್ದೆಗೆ ಮಾತ್ರ (ದೈಹಿಕ ಅಂಗವಿಕಲತೆ ಶೇ.60 ಮೀರದಂತೆ ಇರುವವರು ಮಾತ್ರ.)
10. ವಿಚ್ಛೇದನ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು.)
11. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ.
12. ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.
13. ಇಲಾಖೆಯ ಸುಧಾರಣಾ ಸಂಸ್ಥೆ/ ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
14. ಯೋಜನಾ ನಿರಾಶ್ರಿತರೆಂಬ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.
15. ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿ ಆಗಿದ್ದು ಕಾರ್ಯಕರ್ತೆ/ ಸಹಾಯಕಿ ಹುದ್ದೆಗೆ ಆಯ್ಕೆಯಾದಲ್ಲಿ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕಾಗಿರುತ್ತದೆ. ಈ ಬಗ್ಗೆ ಮುಚ್ಚಳಿಕೆ ಸಲ್ಲಿಸುವುದು.
16. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರು ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿ ಆದಲ್ಲಿ ಕಾರ್ಯಕರ್ತೆ/ ಸಹಾಯಕಿ ಹುದ್ದೆಗೆ ಒಂದು ತಿಂಗಳೊಳಗೆ ರಾಜೀನಾಮೆ ನೀಡಬೇಕಾಗಿರುತ್ತದೆ. ಈ ಬಗ್ಗೆ ಮುಚ್ಚಳಿಕೆ ಸಲ್ಲಿಸುವುದು.
17. ಆನ್‌ಲೈನ್ ಅರ್ಜಿಯೊಂದಿಗೆ ಅಗತ್ಯ ದಾಖಲೆ ಸಲ್ಲಿಸಿದೇ ಅಪೂರ್ಣ ದಾಖಲಾತಿ ಅಥವ ಸ್ಪಷ್ಟವಾಗಿ ಕಾಣದಂತ ದಾಖಲಾತಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು.
18. ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಸಂಪೂರ್ಣವಾಗಿ ಗೌರವಧನ ಆಧಾರಿತ ಹುದ್ದೆಯಾಗಿದ್ದು, ಖಾಯಂ ಹುದ್ದೆಯಾಗಿರುವುದಿಲ್ಲ. ಮಾಹೆಯಾನ ಗೌರವ ದನ: ಕಾರ್ಯಕರ್ತೆಗೆ ರೂ.8000–00, ಮಿನಿ ಅಂಗನವಾಡಿ ಕಾರ್ಯಕರ್ತೆಗೆ ರೂ.4750–00ಸಹಾಯಕಿಗೆ ರೂ.4000–00 ಸರ್ಕಾರವು ಕಾಲ ಕಾಲಕ್ಕೆ ಪರಿಷ್ಕರಿಸುವ ಗೌರವಧನ ಪಡೆಯಲು ಅರ್ಹವಾಗಿರುತ್ತದೆ.
19. ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಸಮಸ್ಯೆ ಉದ್ಭವಿಸಿದಲ್ಲಿ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು ನಗರ ಜಿಲ್ಲೆ.

ಪ್ರತಿಯನ್ನು ಕೆಳಕಂಡವರಿಗೆ ಮಾಹಿತಿ ಸಲ್ಲಿಸಲಾಗಿದೆ.

1) ಮಾನ್ಯ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
2) ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಆಯ್ಕೆ ಸಮಿತಿ,ಬೆಂಗಳೂರು ನಗರ ಜಿಲ್ಲೆ
3) ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲಾ ಪಂಚಾಯತ್, ಬೆಂಗಳೂರು
4) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ಉತ್ತರ–1, ಬೆಂಗಳೂರು ಉತ್ತರ–2, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಬೆಂಗಳೂರು ರಾಜ್ಯ ಮತ್ತು ಆನೇಕಲ್ ಇವರುಗಳಿಗೆ ಕಳುಹಿಸುತ್ತಾ, ವ್ಯಾಪಕ ಪ್ರಚಾರಕ್ಕಾಗಿ ಸದರಿ ಪ್ರಕಟಣೆಯನ್ನು ಖಾಲಿ ಇರುವ ಅಂಗನವಾಡಿ ಕೇಂದ್ರ, ಶಾಲೆ, ಪಂಚಾಯಿತಿಗಳಿಗೆ ನೀಡಿ ಸ್ವೀಕೃತಿ ಪಡೆಯಲು ಸೂಚಿಸಲಾಗಿದೆ.

@ಎಂಎಲ್.